**ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾ ದಂ. ರವರ ನ್ಯಾಯಾಲಯ,**
**ತಿಪಟೂರು**

**ಸಿ.ಸಿ. ನಂ. 1481/2023** **ಪ್ರಾ.ಸಾ –3**
**ಚಾ.ಸಾ – 4**

**ದಿನಾಂಕ: 21.02.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | : | ಟಿ.ಪಿ.ನಂಜುಂಡಸ್ವಾಮಿ |
| ತಂದೆಯ ಹೆಸರು | : | ಸಿ.ವಿ. ಪುಟ್ಟಣ್ಣ |
| ವಯಸ್ಸು | : | 50 ವರ್ಷ |
| ಉದ್ಯೋಗ | : | ಅಬಕಾರಿ ಉಪನಿರೀಕ್ಷಕರು, ಅರಸೀಕೆರೆ ವಲಯ |
| ವಾಸಸ್ಥಳ | : | ತಿಪಟೂರು |

**ಮುಖ್ಯ ವಿಚಾರಣೆ : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ :-**

ನಾನು ಫೆಬ್ರುವರಿ 2021 ರಿಂದ ಅಕ್ಟೋಬರ್ 2025 ರವರೆಗೂ ತಿಪಟೂರು ಉಪ ವಿಭಾಗದಲ್ಲಿ ಅಬಕಾರಿ ಉಪನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕಃ 18.05.2023 ರಂದು ಚಾಸಾ-1 ರವರಿಂದ ಕಡತವನ್ನು ಪಡೆದು ರಾಸಾಯನಿಕ ಪರೀಕ್ಷೆಗೆ ಕಳುಹಿಸಿದ ಮುದ್ದೆಮಾಲನ್ನು ಪಡೆದುಕೊಂಡು ತನಿಖೆಯನ್ನು ಮುಂದುವರೆಸಿರುತ್ತೇನೆ. ದಿನಾಂಕಃ 19.05.2023 ರಂದು KA-13-EL-9543 ಹೀರೋ ಹೋಂಡಾ ಐಸ್ ಮಾರ್ಕ್ 110 ವಾಹನದ ಮಾಲೀಕತ್ವದ ಪತ್ತೆಗಾಗಿ B-extract ವರದಿಯನ್ನು ಕೋರಿ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ತಿಪಟೂರು ರವರಿಂದ ಮನವಿ ಪತ್ರವನ್ನು ಬರೆದಿರುತ್ತೇನೆ. ದಿನಾಂಕಃ 22.05.2023 ರಂದು ಸದರಿ ವಾಹನದ ವರದಿ B-extract ನ್ನು ಪಡೆದುಕೊಂಡಿರುತ್ತೇನೆ. ನಂತರ ದಿನಾಂಕಃ 19.06.2023 ರಂದು ಇಲಾಖಾ ಸಾಕ್ಷಿದಾರರಾದ ಚಾಸಾ-2 ಮತ್ತು 3 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ನಂತರ ದಿನಾಂಕಃ 05.06.2023 ರಂದು ರಾಸಾಯನಿಕ ವಿಶ್ಲೇಷಣಾ ವರದಿಯನ್ನು ಪಡೆದುಕೊಂಡು ಕಡತಕ್ಕೆ ಸೇರಿಸಿಕೊಂಡಿರುತ್ತೇನೆ. ನಂತರ ತನಿಖೆಯನ್ನು ಪೂರ್ಣಗೊಳಿಸಿದ ಬಳಿಕ ದಿನಾಂಕಃ 11.07.2023 ರಂದು ದೋಷಾರೋಪಣಾ ಪಟ್ಟಿಯನ್ನು

ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಈ ಹಂತದಲ್ಲಿ ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಿದ್ದು ಅದು ಸಹಾಯಕ ಪ್ರಾದೇಶಿಕ ಅಧಿಕಾರಿಗಳಿಗೆ ಬರೆದ ಪತ್ರವಾಗಿರುತ್ತದೆ. ಅದನ್ನು ನಿಪಿ-7 ಮತ್ತು ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಗಿದೆ. ಮತ್ತೊಂದು ದಾಖಲಾತಿ ತೋರಿಸಿದ್ದು ಅದು ವಾಹನದ B-extract ಪ್ರತಿಯಾಗಿರುತ್ತದೆ. ಅದನ್ನು ನಿಪಿ-8 ಮತ್ತುಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಗಿದೆ. ಚಾಸಾ-2 ಮತ್ತು 3 ರವರ ಹೇಳಿಕೆಗಳನ್ನು ನಿಪಿ-9 ಮತ್ತು 10 ಮತ್ತು ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-9(ಎ) ಮತ್ತು 10(ಎ) ಎಂದು ಗುರುತಿಸಲಾಗಿದೆ. ಮತ್ತೊಂದು ದಾಖಲಾತಿ ತೋರಿಸಿದ್ದು ಅದು FSL ವರದಿಯಾಗಿದ್ದು ಅದನ್ನು ನಿಪಿ-11 ಮತ್ತು ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಗಿದೆ. ಮತ್ತೊಂದು ದಾಖಲಾತಿ ತೋರಿಸಿದ್ದು ಅದು ದೋಷಾರೋಪಣಾ ಪಟ್ಟಿಯಾಗಿದ್ದು ಅದನ್ನು ನಿಪಿ-12 ಮತ್ತು ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಗಿದೆ. ನ್ಯಾಯಾಲಯದ ಮುಂದಿರುವ ಆರೋಪಿ ಹಾಗೂ ಮುದ್ದೆಮಾಲನ್ನುಸಾಕ್ಷಿಯು ನೋಡಿ ಗುರುತಿಸಿರುತ್ತಾರೆ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರ ಕೋರಿಕೆ ಮೇರೆಗೆ ಮುಂದೂಡಲಾಯಿತು.</u>**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚಿಸಿದೆ)**

**ಸಹಿ/-**
**ಅಪರ ಸಿವಿಲ್ ನ್ಯಾಯಾಧೀಶರು, ತಿಪಟೂರು.**